ಅಧ್ಯಕ್ಷರು : ದಯಮಾಡಿ ತಾವುಗಳು ತಮ್ಮಗಳ ಸ್ಥಾನಕ್ಕೆ ಹೋಗಿ.

ಶ್ರೀ ಹೆಚ್.ಡಿ. ಕುಮಾರಸ್ವಾಮಿ (ಮುಖ್ಯಮಂತ್ರಿಗಳು) : 13 ಮತ್ತು 14ನೇ ತಾರೀಖು ಸಭೆಯನ್ನು ಕರೆಯುತ್ತೇನೆಂದು ಚರ್ಚೆಯಲ್ಲಿ ಹೇಳಿದ್ದೇನೆ. ಆ ದಿನಾಂಕದಂದು ಸಭೆಯನ್ನು ಕರೆದು ಅಧಿಕಾರಿಗಳೊಂದಿಗೆ ಕುಳಿತು ಚರ್ಚೆ ಮಾಡಿ, ಸದಸ್ಯರುಗಳು ನನ್ನ ಗಮನಕ್ಕೆ ತಂದಿರತಕ್ಕಂತಹ ಸಮಸ್ಯೆಗಳನ್ನು ಜೊತೆಗೆ ಸರ್ಕಾರದ ಆರ್ಥಿಕ ಪರಿಸ್ಥಿತಿಯನ್ನು ಗಮನದಲ್ಲಿಟ್ಟುಕೊಂಡು ನಾನು ಏನು ಕೆಲಸಗಳನ್ನು ಮಾಡಬೇಕಾಗುತ್ತದೆ, ಸದಸ್ಯರು ಕೊಟ್ಟಿರತಕ್ಕಂತಹ ಮೆನವಿಗಳನ್ನು ಬೇಡಿಕೆಗಳ ಮೇಲೆ ನಾನು ಜರೂರಾಗಿ ಕ್ರಮ ತೆಗೆದುಕೊಳ್ಳುತ್ತೇನೆ.

ಅಧ್ಯಕ್ಷರು : ನಿಮ್ಮ ನಿಮ್ಮ ಸ್ಥಾನಗಳಿಗೆ ಹೋಗಿ ಅಧಿಕಾರಿಗಳು ಇರುತ್ತಾರೆ, ಆಗ ಮಾತನಾಡಿ.

(ಈ ಹಂತದಲ್ಲಿ ಸದನದ ಬಾವಿಯಲ್ಲಿ ಧರಣಿ ಹೂಡಿದ್ದ ಮಾನ್ಯ ಸದಸ್ಯರು ತಮ್ಮ ತಮ್ಮ ಸ್ಥಾನಗಳಿಗೆ ತೆರಳಿದರು)

3. ಶಾಸನ ರಚನೆ

ವಿಧೇಯಕದ ಮಂಡನೆ

(1) ಕರ್ನಾಟಕ ವಿಧಾನಮಂಡಲ (ಅನರ್ಹತೆಯನ್ನು ತಡೆಗಟ್ಟುವ) (ತಿದ್ದುಪಡಿ) ವಿಧೇಯಕ 2006

ಮಂಡನೆಗೆ ಅನುಮತಿ ಕೋರಿಕೆ

ಶ್ರೀ ಬಸವರಾಜ ಎಸ್. ಹೊರಟ್ಟಿ (ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ, ಕಾನೂನು ನ್ಯಾಯ, ಮಾನವ ಹಕ್ಕುಗಳು ಹಾಗೂ ಸಂಸದೀಯ ವ್ಯವಹಾರಗಳ ಸಚಿವರು) : ಮಾನ್ಯ ಅಧ್ಯಕ್ಷರೆ, " 2006ನೇ ಸಾಲಿನ ಕರ್ನಾಟಕ ವಿಧಾನಮಂಡಲ (ಅನರ್ಹತೆಯನ್ನು ತಡೆಗಟ್ಟುವ) (ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ತಮ್ಮ ಅನುಮತಿಯನ್ನು ಕೋರುತ್ತೇನೆ ".

ಅಧ್ಯಕ್ಷರು : ಪ್ರಸ್ತಾವ ಏನೆಂದರೆ, "2006ನೇ ಸಾಲಿನ ಕರ್ನಾಟಕ ವಿಧಾನಮಂಡಲ (ಅನರ್ಹತೆಯನ್ನು ತಡೆಗಟ್ಟುವ) (ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಅನುಮತಿಯನ್ನು ನೀಡುವುದು."

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತ ಅನುಮತಿಯನ್ನು ನೀಡಲಾಯಿತು

ಶ್ರೀ ಬಸವರಾಜ ಎಸ್. ಹೊರಟ್ಟಿ (ಪ್ರಾಥಮಿಕ ಹಾಗು ಪ್ರೌಢಶಿಕ್ಷಣ, ಕಾನೂನು ನ್ಯಾಯ, ಮಾನವ ಹಕ್ಕುಗಳು ಹಾಗೂ ಸಂಸದೀಯ ವ್ಯವಹಾರಗಳ ಸಚಿವರು) : ಮಾನ್ಯ ಅಧ್ಯಕ್ಷರೇ, "2006ನೇ ಸಾಲಿನ ಕರ್ನಾಟಕ

ವಿಧಾನಮಂಡಲ (ಅನರ್ಹತೆಯನ್ನು ತಡೆಗಟ್ಟುವ) (ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸುತ್ತೇನೆ."

ಅಧ್ಯಕ್ಷರು : ವಿಧೇಯಕವನ್ನು ಮಂಡಿಸಲಾಗಿದೆ.

(ಅನುಬಂಧ–1)

ಅಧ್ಯಕ್ಷರು : ಈಗ ಸದನವನ್ನು 3–45 ಗಂಟೆಗೆ ಸೇರುವಂತೆ ಮುಂದೂಡಲಾಗಿದೆ.

(ಸದನವು 2 ಗಂಟೆ 51 ನಿಮಿಷಕ್ಕೆ ಮುಂದೂಡಲ್ಪಟ್ಟು ಪುನಃ 3–45 ಗಂಟೆಗೆ ಸಮಾವೇಶಗೊಳ್ಳಲು ನಿರ್ಣಯಿಸಿತು)

(ಸದನವು 4–08 ನಿಮಿಷಕ್ಕೆ ಸಮಾವೇಶಗೊಂಡಿತು ಮಾನ್ಯ ಅಧ್ಯಕ್ಷರು (ಶ್ರೀ ಕೃಷ್ಣರವರು) ಅಧ್ಯಕ್ಷ ಪೀಠವನ್ನು ಅಲಂಕರಿಸಿದರು),

ಅಧ್ಯಕ್ಷರು : ಈಗ ವಿಧೇಯಕವನ್ನು ಪರ್ಯಾಲೋಚನೆಗೆ ತೆಗೆದುಕೊಳ್ಳೋಣ.

(ಆ) ಕರ್ನಾಟಕ ವಿಧಾನ ಮಂಡಲ (ಅನರ್ಹತೆಯನ್ನು ತಡೆಗಟ್ಟುವ) (ತಿದ್ದುಪಡಿ) ವಿಧೇಯಕ 2006.

ಶ್ರೀ ಬಿ.ಎಸ್. ಹೊರಟ್ಟಿ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು) : ಮಾನ್ಯ ಅಧ್ಯಕ್ಷರೇ "2006 ನೇ ಇಸವಿಯ ಕರ್ನಾಟಕ ವಿಧಾನ ಮಂಡಲ (ಅನರ್ಹತೆಯನ್ನು ತಡೆಗಟ್ಟುವ) (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಕೋರುತ್ತೇನೆ."

ಪ್ರಸ್ತಾವ ಮಂಡಿಸಲ್ಪಟ್ಟಿತು.

ಶ್ರೀ ಬಸವರಾಜ ಹೊರಟ್ಟಿ : ಅಧ್ಯಕ್ಷರೇ, ಸಂವಿಧಾನ 191ರ ಅನುಚ್ಛೇದ 1ರಡಿ ಯಾವುದೇ ವಿಧಾನಸಭೆ ಪರಿಷತ್ತು ಸದಸ್ಯರು ಹೇಗೆ ಅನರ್ಹತೆ ಹೊಂದುತ್ತಾರೆ ಎಂದು ಹೇಳಲಾಗಿದೆ. ಒಂದನೇ ಖಂಡದಲ್ಲಿ ತಿಳಿಸಿರುವಂತೆ ಯಾವುದೇ ಸದಸ್ಯ ಕೇಂದ್ರ ಸರ್ಕಾರದ ಅಥವಾ ರಾಜ್ಯ ಸರ್ಕಾರದ ಲಾಭದಾಯಕ ಹುದ್ದೆ ಹೊಂದಿಲ್ಲ ಆತನು ವಿಧಾನಮಂಡಲದ ಸದಸ್ಯನಾಗಲು ಅಥವಾ ಸದಸ್ಯನಾಗಿ ಆಯ್ಕೆ ಹೊಂದಲು ಅರ್ಹತೆ ಹೊಂದಿರುತ್ತಾನೆ. ಆದರೆ ರಾಜ್ಯ ಸರ್ಕಾರವು ಈ ರೀತಿ ಅನರ್ಹತೆಗೊಳಪಡದ ಹುದ್ದೆಯನ್ನು ಯಾವುದು ಒಂದು ಸ್ಪಷ್ಟವಾಗಿ ಕಾನೂನು ಮೂಲಕ ಘೋಷಿಸಬೇಕಾಗುತ್ತದೆ. ಕರ್ನಾಟಕದಲ್ಲಿ ಕರ್ನಾಟಕ ವಿಧಾನಮಂಡಲ ಸದಸ್ಯರು ಆಯ್ಕೆಯಾಗುವಾಗ ಯಾವ ಹುದ್ದೆ ಹೊಂದಿದ್ದರೂ ಅನರ್ಹತೆ ಹೊಂದುವುದಿಲ್ಲ ಎಂಬ ಅಂಶವನ್ನು ಸದರಿ